All India Radio: Bangalore

National Bulletin In Kannada

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

20.05.2026 19.35 hrs

ಮುಖ್ಯಾಂಶಗಳು

- ಭಾರತ-ಇಟಲಿ ದ್ವಿಪಕ್ಷೀಯ ಸಂಬಂಧ: ವಿಶೇಷ ಕಾರ್ಯತಂತ್ರದ ಪಾಲುದಾರಿಕೆ ಮೇಲ್ದರ್ಜೆಗೇರಿಸಲು ನಿರ್ಧಾರ
- ಯುಎಲ್‌ಪಿಜಿಎಮ್- ವಿ೩ ಕ್ಷಿಪಣಿ ಯಶಸ್ವಿಯಾಗಿ ಪರೀಕ್ಷಿಸಿದ ಡಿಆರ್‌ಡಿಒ; ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ಲಾಘನೆ
- ಜಾತಿವಾರು ಜನಗಣತಿ ನಡೆಸುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿ ವಜಾಗೊಳಿಸಿದ ಸುಪ್ರೀಂ ಕೋರ್ಟ್
- ನೀಟ್-ಯುಜಿ ಮರುಪರೀಕ್ಷೆ: ಸುಭದ್ರತೆ ಖಚಿತಪಡಿಸಿಕೊಳ್ಳಲು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಸೂಚನೆ
- ಐಪಿಎಲ್ ಟಿ-೨೦ ಕ್ರಿಕೆಟ್: ಮುಂಬೈ ಇಂಡಿಯನ್ಸ್ ವಿರುದ್ಧ ಟಾಸ್ ಗೆದ್ದು, ಫೀಲ್ಡಿಂಗ್ ಆಯ್ದುಕೊಂಡ ಕೋಲ್ಕತ್ತಾ ನೈಟ್ ರೈಡರ್ಸ್

---

ಭಾರತ ಮತ್ತು ಇಟಲಿ ತಮ್ಮ ದ್ವಿಪಕ್ಷೀಯ ಸಂಬಂಧವನ್ನು ವಿಶೇಷ ಕಾರ್ಯತಂತ್ರದ ಪಾಲುದಾರಿಕೆಗೆ ಮೇಲ್ದರ್ಜೆಗೇರಿಸಲು ನಿರ್ಧರಿಸಿವೆ ಎಂದು ಪ್ರಧಾನಿ ಮೋದಿ ಘೋಷಿಸಿದ್ದಾರೆ.

ವ್ಯಾಪಾರ, ಹೂಡಿಕೆ, ತಂತ್ರಜ್ಞಾನ, ರಕ್ಷಣೆ, ಶುದ್ಧ ಇಂಧನ ಮತ್ತು ಕಾರ್ಯತಂತ್ರದ ಪಾಲುದಾರಿಕೆಗಳಲ್ಲಿ ಸಹಕಾರವನ್ನು ಹೆಚ್ಚಿಸುವ ಗುರಿಯನ್ನು ಈ ಸಭೆ ಕೇಂದ್ರೀಕರಿಸಿದೆ. ಉಭಯ ದೇಶಗಳ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಬಗ್ಗೆಯೂ ಇಬ್ಬರೂ ನಾಯಕರು ಚರ್ಚಿಸಿದರು. ಆರ್ಥಿಕ ಸಹಯೋಗ ಮತ್ತು ಜನರಿಂದ ಜನರಿಗೆ ಸಂಬಂಧಗಳನ್ನು ವಿಸ್ತರಿಸುವುದರ ಮೇಲೆ ಒತ್ತು ನೀಡುವ ಮೂಲಕ ಉಭಯ ದೇಶಗಳ ನಡುವೆ ಬೆಳೆಯುತ್ತಿರುವ ಕಾರ್ಯತಂತ್ರದ ಪಾಲುದಾರಿಕೆಯನ್ನು ಮಾತುಕತೆಗಳು ಪ್ರತಿಬಿಂಬಿಸುತ್ತವೆ.

ರೋಮ್‌ನಲ್ಲಿ ತಮ್ಮ ಇಟಾಲಿಯನ್ ಸಹವರ್ತಿಯೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಿದ ನಂತರ ಜಂಟಿ ಪತ್ರಿಕಾ ಹೇಳಿಕೆಯಲ್ಲಿ ಪ್ರಧಾನಿ ಮಾತನಾಡಿದರು. ಭಾರತ-ಇಟಲಿ ಜಂಟಿ

ಕಾರ್ಯತಂತ್ರದ ಕ್ರಿಯಾ ಯೋಜನೆ ೨೦೨೫-೨೦೨೯ ದ್ವಿಪಕ್ಷೀಯ ಸಂಬಂಧಗಳಿಗೆ ಪ್ರಾಯೋಗಿಕ ಮತ್ತು ಭವಿಷ್ಯದ ಚೌಕಟ್ಟನ್ನು ಒದಗಿಸುತ್ತದೆ. ಸಹಕಾರವನ್ನು ಹೆಚ್ಚಿಸುವ ಕುರಿತು ಉಭಯ ದೇಶಗಳು ವ್ಯಾಪಕ ಚರ್ಚೆಗಳನ್ನು ನಡೆಸಿವೆ ಎಂದು ಅವರು ತಿಳಿಸಿದರು. ಭಾರತ-ಇಟಲಿ ನಾವೀನ್ಯತೆ ಕೇಂದ್ರವನ್ನು ಸ್ಥಾಪಿಸುವ ಬಗ್ಗೆ ಕೆಲಸಗಳು ಪ್ರಗತಿಯಲ್ಲಿವೆ ಎಂದು ಪ್ರಧಾನಿ ಮೋದಿ ಹೇಳಿದರು.

ಭಾರತ ಮತ್ತು ಇಟಲಿ ನಡುವಿನ ಸಂಬಂಧಗಳನ್ನು ವಿಶೇಷ ಕಾರ್ಯತಂತ್ರದ ಪಾಲುದಾರಿಕೆಗೆ ಏರಿಸಲಾಗುತ್ತಿದ್ದು, ದ್ವಿಪಕ್ಷೀಯ ಸಂಬಂಧಗಳು ಈಗ ತಮ್ಮ ಪೂರ್ಣ ಸಾಮರ್ಥ್ಯವನ್ನು ಅರಿತುಕೊಳ್ಳಲು ಸಮರ್ಥವಾಗಿವೆ ಎಂದು ಇಟಲಿಯ ಪ್ರಧಾನಿ ಜಾರ್ಜಿಯಾ ಮೆಲೋನಿ ಅಭಿಪ್ರಾಯ ಪಟ್ಟಿದ್ದಾರೆ. ದೇಶಗಳ ನಡುವಿನ ಸ್ನೇಹವು ಗೌರವ ಮತ್ತು ಪರಸ್ಪರ ನಂಬಿಕೆಯನ್ನು ಆಧರಿಸಿದೆ. ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಸಂಚರಣೆಯ ಸ್ವಾತಂತ್ರ್ಯವನ್ನು ಖಾತರಿಪಡಿಸುವ ಮಹತ್ವವನ್ನು ಮೆಲೋನಿ ಒತ್ತಿ ಹೇಳಿದರು.

---

ಆತ್ಮನಿರ್ಭರ ಭಾರತ ಉಪಕ್ರಮದ ಅಡಿಯಲ್ಲಿ ಭಾರತ ತನ್ನ ದೇಶೀಯ ರಕ್ಷಣಾ ಸಾಮರ್ಥ್ಯಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಮತ್ತೊಂದು ಮಹತ್ವದ ಹೆಜ್ಜೆಯನ್ನು ಇಟ್ಟಿದೆ.

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ-ಡಿಆರ್‌ಡಿಒ ಮಾನವರಹಿತ ವೈಮಾನಿಕ ವಾಹನದಿಂದ ಉಡಾವಣೆ ಮಾಡಲಾಗುವ ನಿಖರ ಮಾರ್ಗದರ್ಶಿ ಕ್ಷಿಪಣಿ ಯುಎಲ್‌ಪಿಜಿಎಮ್- ವಿ೩ ರ ಅಂತಿಮ ಹಂತದ ಅಭಿವೃದ್ಧಿ ಪರೀಕ್ಷೆಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದು, ಇದು ದೇಶದ ರಕ್ಷಣಾ ವಲಯದಲ್ಲಿ ಒಂದು ಪ್ರಮುಖ ಸಾಧನೆಯಾಗಿದೆ.

ಆಂಧ್ರಪ್ರದೇಶದ ಕರ್ನೂಲ್ ಬಳಿ ಇರುವ ಡಿಆರ್‌ಡಿಒ ಪರೀಕ್ಷಾ ವಲಯದಲ್ಲಿ ಕ್ಷಿಪಣಿಯನ್ನು ಹಾರಿಸಿ, ಸುಧಾರಿತ ಸಂಯೋಜಿತ 'ಗ್ರೌಂಡ್ ಕಂಟ್ರೋಲ್ ಸಿಸ್ಟಮ್' ಮೂಲಕ ನಿಯಂತ್ರಿಸಲಾಯಿತು. ಇದನ್ನು ಉಡಾವಣೆ ಮತ್ತು ಕಾರ್ಯಾಚರಣೆಯ ಸಿದ್ಧತೆಯನ್ನು ಸ್ವಯಂಚಾಲಿತಗೊಳಿಸಲು ವಿನ್ಯಾಸಗೊಳಿಸಲಾಗಿದೆ. ಈ ಪರೀಕ್ಷೆಗಳು ವಿವಿಧ ಯುದ್ಧ ಸನ್ನಿವೇಶಗಳಲ್ಲಿ ಕ್ಷಿಪಣಿಯ ನಿಖರವಾದ ದಾಳಿ ಸಾಮರ್ಥ್ಯ, ವಿಶ್ವಾಸಾರ್ಹತೆ ಮತ್ತು ಪರಿಣಾಮಕಾರಿತ್ವವನ್ನು ಯಶಸ್ವಿಯಾಗಿ ಪ್ರದರ್ಶಿಸಿದವು.

ಈ ಕ್ಷಿಪಣಿಯನ್ನು ಹೈದರಾಬಾದ್‌ನ ರಿಸರ್ಚ್ ಸೆಂಟರ್ ಇಮಾರತ್, ಇತರ ಡಿಆರ್‌ಡಿಒ ಪ್ರಯೋಗಾಲಯಗಳ ಸಹಯೋಗದೊಂದಿಗೆ ಅಭಿವೃದ್ಧಿಪಡಿಸಿದೆ. ಇದರ ಉತ್ಪಾದನೆಗಾಗಿ,

ಡಿಆರ್‌ಡಿಒ ಸಂಸ್ಥೆಯು ಭಾರತ್ ಡೈನಾಮಿಕ್ಸ್ ಲಿಮಿಟೆಡ್ ಮತ್ತು ಅದಾನಿ ಡಿಫೆನ್ಸ್ ಸಿಸ್ಟಮ್ಸ್ ಆಂಡ್ ಟೆಕ್ನಾಲಜೀಸ್ ಲಿಮಿಟೆಡ್‌ನೊಂದಿಗೆ ಪಾಲುದಾರಿಕೆ ಮಾಡಿಕೊಂಡಿದೆ.

ಪರೀಕ್ಷೆಗಳಿಗಾಗಿ ಈ ಕ್ಷಿಪಣಿ ವ್ಯವಸ್ಥೆಯನ್ನು ಬೆಂಗಳೂರಿನ ನ್ಯೂಸ್ಪೇಸ್ ರಿಸರ್ಚ್ ಆಂಡ್ ಟೆಕ್ನಾಲಜೀಸ್ ಅಭಿವೃದ್ಧಿಪಡಿಸಿದ ಯುಎವಿಗಳ ಜೊತೆಗೆ ಸಂಯೋಜಿಸಲಾಗಿತ್ತು. ಈ ಪರೀಕ್ಷೆಗಳ ಯಶಸ್ವಿ ಮುಕ್ತಾಯವು ಕ್ಷಿಪಣಿ ವ್ಯವಸ್ಥೆಯ ಸರಣಿ ಉತ್ಪಾದನೆಗೆ ಹಾದಿ ಸುಗಮಗೊಳಿಸಿದೆ ಮತ್ತು ಭಾರತದ ದೇಶೀಯ ರಕ್ಷಣಾ ಸಾಮರ್ಥ್ಯಗಳನ್ನು ಇನ್ನಷ್ಟು ಬಲಪಡಿಸಿದೆ.

ಯುಎಲ್‌ಪಿಜಿಎಂ-ವಿ೩ ಕ್ಷಿಪಣಿಯ ಯಶಸ್ವಿ ಅಭಿವೃದ್ಧಿ ಪರೀಕ್ಷೆಗಳಿಗಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಡಿಆರ್‌ಡಿಒ, ಸಾರ್ವಜನಿಕ ವಲಯದ ಉದ್ಯಮಗಳು, ರಕ್ಷಣಾ ಹಾಗೂ ಉತ್ಪಾದನಾ ಪಾಲುದಾರರು ಮತ್ತು ಕೈಗಾರಿಕಾ ವಲಯವನ್ನು ಶ್ಲಾಘಿಸಿದ್ದಾರೆ.

---

ರಕ್ಷಣಾ ಸಚಿವ ರಾಜನಾಥ್ ಸಿಂಗ್, ದಕ್ಷಿಣ ಕೊರಿಯಾದ ರಕ್ಷಣಾ ಸ್ವಾಧೀನ ಕಾರ್ಯಕ್ರಮ ಆಡಳಿತ ಸಚಿವ ಲೀ ಯೋಂಗ್-ಚುಲ್ ಅವರನ್ನು ಸಿಯೋಲ್‌ನಲ್ಲಿಂದು ಭೇಟಿಯಾದರು.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಜಂಟಿ ಅಭಿವೃದ್ಧಿ, ಜಂಟಿ ಉತ್ಪಾದನೆ ಮತ್ತು ಜಂಟಿ ರಫ್ತುಗಳಿಗೆ ಮಾರ್ಗಗಳನ್ನು ಸೃಷ್ಟಿಸಲು ಸಹಬಾಳ್ವೆಯ ಪ್ರಯತ್ನಗಳನ್ನು ಬಳಸಿಕೊಳ್ಳಲು ಎರಡೂ ಕಡೆಯವರು ಒಪ್ಪಿಕೊಂಡಿದ್ದಾರೆ. ಎರಡು ದೇಶಗಳ ನಾವೀನ್ಯತೆ ಪರಿಸರ ವ್ಯವಸ್ಥೆಗಳನ್ನು ಸಂಯೋಜಿಸುವ ಮಹತ್ವಾಕಾಂಕ್ಷೆಯ ಕೈಂಡ್-ಎಕ್ಸ್ ಉಪಕ್ರಮದ ಸಾಮರ್ಥ್ಯವನ್ನು ಅನಾವರಣ ಮಾಡುವ ಮಾರ್ಗಸೂಚಿಯನ್ನು ಸಹ ಚರ್ಚಿಸಲಾಗಿದೆ ಎಂದು ಸಚಿವ ಸಿಂಗ್ ಹೇಳಿದರು.

---

ಮುಂಬರುವ ಜನಗಣತಿಯ ಭಾಗವಾಗಿ ಜಾತಿವಾರು ಜನಗಣತಿ ನಡೆಸುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಇಂದು ವಜಾಗೊಳಿಸಿದೆ. ಈ ವಿಷಯವು ಸರ್ಕಾರದ ನೀತಿ ವ್ಯಾಪ್ತಿಗೆ ಬರುತ್ತದೆ ಎಂದು ಕೋರ್ಟ್ ಹೇಳಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ಪೀಠ, ಹಿಂದುಳಿದ ವರ್ಗಗಳ ಜನರಿಗಾಗಿ ಕಲ್ಯಾಣ ಯೋಜನೆಗಳನ್ನು ರೂಪಿಸಲು ಅವರ ಜನಸಂಖ್ಯೆಯನ್ನು ತಿಳಿಯುವುದು ಸರ್ಕಾರಕ್ಕೆ

ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟಿದೆ. ಇಂತಹ ದತ್ತಾಂಶವನ್ನು ಸಂಗ್ರಹಿಸುವುದರಲ್ಲಿ ಯಾವುದೇ ತಪ್ಪಿಲ್ಲ ಎಂದು ಹೇಳಿದ ಪೀಠ, ಈ ವಿಷಯದಲ್ಲಿ ಮಧ್ಯಪ್ರವೇಶಿಸಲು ನಿರಾಕರಿಸಿತು.

---

ಸರ್ಕಾರಿ ಕಾನೂನು ಸಮಿತಿಗಳು ಮತ್ತು ಕಾನೂನು ಅಧಿಕಾರಿಗಳ ನೇಮಕಾತಿಯಲ್ಲಿ ಮಹಿಳಾ ವಕೀಲರಿಗೆ ಶೇಕಡಾ ೩೦ ರಷ್ಟು ಮೀಸಲಾತಿಯನ್ನು ಕೋರಿ ಸಲ್ಲಿಕೆಯಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಇಂದು ಕೇಂದ್ರ ಸರ್ಕಾರ ಸೇರಿದಂತೆ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಂದ ಪ್ರತಿಕ್ರಿಯೆ ಕೇಳಿದೆ.

ಟ್ರಸ್ಟ್‌ವೊಂದು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ಪೀಠವು ಈ ಕುರಿತು ನೋಟಿಸ್ ಜಾರಿ ಮಾಡಿದೆ.

ಸುಪ್ರೀಂ ಕೋರ್ಟ್ ಮತ್ತು ಹೈಕೋರ್ಟ್‌ಗಳಿಂದ ಹಿಡಿದು ಕಾನೂನು ನೆರವು ಪ್ರಾಧಿಕಾರಗಳು ಮತ್ತು ಸಾರ್ವಜನಿಕ ವಲಯದ ಉದ್ಯಮಗಳವರೆಗಿನ ಸರ್ಕಾರಿ ಸಮಿತಿಗಳಲ್ಲಿ ಮಹಿಳಾ ವಕೀಲರಿಗೆ ಕನಿಷ್ಠ ಶೇಕಡಾ ೩೦ ರಷ್ಟು ಪ್ರಾತಿನಿಧ್ಯವನ್ನು ಖಚಿತಪಡಿಸಲು ನಿರ್ದೇಶನಗಳನ್ನು ನೀಡುವಂತೆ ಈ ಅರ್ಜಿಯಲ್ಲಿ ಕೋರಲಾಗಿದೆ.

---

ವಿಕಸಿತ ಭಾರತದ ಗುರಿಯನ್ನು ಸಾಧಿಸಲು ಮತ್ತು ಸಮಾಜವನ್ನು ಪ್ರಗತಿಯ ಶಿಖರಕ್ಕೆ ಕೊಂಡೊಯ್ಯಲು, ಅಧಿಕಾರಿಗಳು ಹಲವಾರು ಸವಾಲುಗಳನ್ನು ಎದುರಿಸಿ ಮುನ್ನಡೆಯಬೇಕಾಗುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದ್ದಾರೆ.

ರಾಷ್ಟ್ರಪತಿ ಭವನದಲ್ಲಿಂದು ೨೦೨೪ ರ ಬ್ಯಾಚ್‌ನ ಐಎಎಸ್ ಅಧಿಕಾರಿಗಳ ತಂಡವನ್ನು ಭೇಟಿ ಮಾಡಿದ ಸಂದರ್ಭದಲ್ಲಿ ಅವರು ಈ ವಿಷಯ ತಿಳಿಸಿದರು.

ಯುವ ಅಧಿಕಾರಿಗಳಿಗೆ ವಿವಿಧ ಕ್ಷೇತ್ರಗಳಲ್ಲಿ ಕೆಲಸ ಮಾಡುವ ಮತ್ತು ವಿಶೇಷ ಕ್ಷೇತ್ರಗಳ ತಜ್ಞರ ತಂಡಗಳನ್ನು ಮುನ್ನಡೆಸುವ ವಿಶಿಷ್ಟ ಅವಕಾಶ ಸಿಗಲಿದೆ. ಇದೇ ವೇಳೆ, ಯಾವುದೇ ನಿರ್ಧಾರವನ್ನು ತೆಗೆದುಕೊಳ್ಳದೆ ಇರುವುದು ನೈತಿಕತೆಯಾಗುವುದಿಲ್ಲ. ಸಾರ್ವಜನಿಕ ಹಿತಾಸಕ್ತಿ ಮತ್ತು ಸ್ಥಾಪಿತ

ನಿಯಮಾವಳಿಗಳಿಗೆ ಅನುಗುಣವಾಗಿ ಸರಿಯಾದ ನಿರ್ಧಾರಗಳನ್ನು ತೆಗೆದುಕೊಳ್ಳುವುದೇ ನಿಜವಾದ ನೈತಿಕತೆಯಾಗಿದೆ ಎಂದು ರಾಷ್ಟ್ರಪತಿ ಒತ್ತಿ ಹೇಳಿದರು.

---

ಮುಂಬರುವ ನೀಟ್-ಯುಜಿ ಮರುಪರೀಕ್ಷೆಯ ಸುರಕ್ಷತೆ, ಸುಭದ್ರತೆ ಮತ್ತು ನ್ಯಾಯಯುತ ನಡವಳಿಕೆಯನ್ನು ಖಚಿತಪಡಿಸಿಕೊಳ್ಳಲು ಹೆಚ್ಚಿನ ಜಾಗರೂಕತೆ ಮತ್ತು ಪರಿಪೂರ್ಣ ಭದ್ರತಾ ವ್ಯವಸ್ಥೆಗಳ ಅಗತ್ಯವನ್ನು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಒತ್ತಿ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ಕೇಂದ್ರ ಭದ್ರತೆ ಮತ್ತು ಗುಪ್ತಚರ ಸಂಸ್ಥೆಗಳೊಂದಿಗೆ ಉನ್ನತ ಮಟ್ಟದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಭೆಯಲ್ಲಿ, ಅನಾಮಧೇಯ ಆನ್‌ಲೈನ್ ಗುಂಪುಗಳ ಮೂಲಕ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಂಬಂಧಿಸಿದ ತಪ್ಪು ಮಾಹಿತಿ ಹೆಚ್ಚುತ್ತಿರುವ ಬಗ್ಗೆ ಗಂಭೀರ ಕಳವಳಗಳನ್ನು ವ್ಯಕ್ತಪಡಿಸಲಾಯಿತು. ಇಂತಹ ನೆಟ್‌ವರ್ಕ್‌ಗಳ ಮೇಲೆ ಕೇಂದ್ರೀಕೃತ ಕ್ರಮ ಕೈಗೊಳ್ಳಲು ನಿರ್ದೇಶಿಸಿದರು.

ತಪ್ಪು ಮಾಹಿತಿಯನ್ನು ತ್ವರಿತವಾಗಿ ನಿಗ್ರಹಿಸಲು ಮತ್ತು ಪರೀಕ್ಷಾ ವ್ಯವಸ್ಥೆಯ ಸಮಗ್ರತೆಯನ್ನು ರಕ್ಷಿಸಲು ಸಾಮಾಜಿಕ ಮಾಧ್ಯಮ ವೇದಿಕೆಗಳು ಶಿಕ್ಷಣ ಸಚಿವಾಲಯ, ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಮತ್ತು ಕಾನೂನು ಜಾರಿ ಸಂಸ್ಥೆಗಳೊಂದಿಗೆ ನಿಕಟ ಸಮನ್ವಯದೊಂದಿಗೆ ಕೆಲಸ ಮಾಡಬೇಕು ಎಂದು ಸಚಿವರು ಒತ್ತಿ ಹೇಳಿದರು.

---

ಕೊಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಕೋಲ್ಕತ್ತ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

---

ಭಾರತದ ಡಿಜಿಟಲ್ ಆರ್ಥಿಕತೆಯು ೨೦೩೦ ರ ವೇಳೆಗೆ ದೇಶದ ಜಿಡಿಪಿಗೆ ಸುಮಾರು ಶೇಕಡಾ ೨೦ರಷ್ಟು ಕೊಡುಗೆ ನೀಡುವ ನಿರೀಕ್ಷೆಯಿದೆ ಎಂದು ರಾಷ್ಟ್ರೀಯ ನಿರ್ಣಾಯಕ ಮಾಹಿತಿ ಮೂಲಸೌಕರ್ಯ ಸಂರಕ್ಷಣಾ ಕೇಂದ್ರದ ಮಹಾನಿರ್ದೇಶಕ ನವೀನ್ ಕುಮಾರ್ ಸಿಂಗ್ ಇಂದು ತಿಳಿಸಿದ್ದಾರೆ.

ನವದೆಹಲಿಯಲ್ಲಿ ನಡೆದ ಫಿಕ್ಕಿ ಸಂಸ್ಥೆಯ ’ಸೈಬರ್‌ಕಾಮ್ ೨೦೨೪’ ರ ೭ನೇ ಆವೃತ್ತಿಯ ಉದ್ಘಾಟನಾ ಸಮಾರಂಭವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಭಾರತ ಡಿಜಿಟಲ್ ಪಾವತಿಗಳಲ್ಲಿ ವಿಶ್ವದ ಪ್ರಮುಖ ದೇಶವಾಗಿ ಹೊರಹೊಮ್ಮಿದೆ ಮತ್ತು ಎಲ್ಲರನ್ನೂ ಒಳಗೊಳ್ಳುವ ಹಾಗೂ ಪ್ರಜಾಸತ್ತಾತ್ಮಕವಾದ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಮಾದರಿಯನ್ನು ಅಭಿವೃದ್ಧಿಪಡಿಸಿದೆ ಎಂದು ಸಿಂಗ್ ಉಲ್ಲೇಖಿಸಿದ್ದಾರೆ.

ಯುಪಿಐ, ಆಪ್ಟಿಕಲ್ ಫೈಬರ್ ವಿಸ್ತರಣೆ, ಡಿಜಿಟಲ್ ಆಡಳಿತ ಮತ್ತು ಕಾಗದ ರಹಿತ ವ್ಯವಸ್ಥೆಗಳಂತಹ ಉಪಕ್ರಮಗಳ ಮೂಲಕ ದೇಶವು ನಗದು ಆಧಾರಿತ ಅನೌಪಚಾರಿಕ ಆರ್ಥಿಕತೆಯಿಂದ ಹೆಚ್ಚಿನ ಉತ್ಪಾದಕತೆಯ ಡಿಜಿಟಲ್ ಆರ್ಥಿಕತೆಯತ್ತ ಮುನ್ನಡೆದಿದೆ ಎಂದು ಅವರು ಒತ್ತಿ ಹೇಳಿದ್ದಾರೆ.

__________ ಮುಕ್ತಾಯ ___________